ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬೆಂಗಳೂರು ಸುತ್ತ ಮುತ್ತಲ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

908 (1109) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾನಿಗೆ ಹತ್ತಿರವಿರುವ ಅಕ್ಕಾಪಕ್ಕದ ಜಿಲ್ಲೆಗಳಲ್ಲಿ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಜಮೀನು ಗುರುತಿಸಲಾಗಿದೆಯೇ; ಎಷ್ಟು ಎಕರೆಗಳನ್ನು ಕಾಯ್ದಿರಿಸಿದೆ ;

(ಆ) ಬೆಂಗಳೂರಿಗೆ ಸಮೀಪವಿರುವ ಸುತ್ತಮುತ್ತಲ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶವಿದ್ದರೂ ಯಾವುದೇ ಕೈಗಾರಿಕೆಗಳನ್ನು ಸ್ಥಾಪಿಸದಿರಲು ಕಾರಣವೇನು;

(ಇ) ಬೆಂಗಳೂರು ಜಿಲ್ಲೆಯ ಅಕ್ಕಾಪಕ್ಕದ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸದಿರುವುದರಿಂದ ವಿದ್ಯಾವಂತ ನಿರುದ್ಯೋಗಿಗಳು ಉದ್ಯೋಗಕ್ಕಾಗಿ ಬೆಂಗಳೂರಿಗೆ ಹೋಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು ಶಾಶ್ವತವಾಗಿ ಉದ್ಯೋಗಾವಕಾಶ ಕಲ್ಪಿಸಿಕೊಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?